ಕರ್ನಾಟಕ ಸರ್ಕಾರ
<u>ತಾಂತ್ರಿಕ ಶಿಕ್ಷಣ ಇಲಾಖೆ</u>

ಸಂಖ್ಯೆ: ಬಿಟಿಇ/06/ಇಸಿಎಸ್(1)/2017

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು -1
ದಿನಾಂಕ: 18-11-2017

<u>ಸುತ್ತೋಲೆ</u>

ವಿಷಯ: 2017 ರ ನವೆಂಬರ್/ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಯ ಥಿಯರಿ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಪೂರೈಕೆ ಬಗ್ಗೆ

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2017 ರ ನವೆಂಬರ್/ಡಿಸೆಂಬರ್ ಡಿಪ್ಲೊಮ ಸೆಮಿಸ್ಟರ್ ಥಿಯರಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯನ್ನು ಸಂಸ್ಥೆಗಳ ಬೇಡಿಕೆಗನುಗುಣವಾಗಿ ಈಗಾಗಲೇ ರಾಜ್ಯದ ವಿವಿಧ ಪಾಲಿಟೆಕ್ನಿಕ್‌ಗಳಿಗೆ ಕಳುಹಿಸಲಾಗಿದೆ. ಬೆಂಗಳೂರು ನಗರ ಹೊರತುಪಡಿಸಿ ಇತರೆ ಸಂಸ್ಥೆಯ ಪ್ರಿನ್ಸಿಪಾಲರು/ಮುಖ್ಯ ಅಧೀಕ್ಷಕರು/ಉಪ ಮುಖ್ಯ ಅಧೀಕ್ಷಕರು/ಮುಖ್ಯ ವೀಕ್ಷಕರು ತಮಗೆ ಪೂರೈಕೆಯಾಗಿರುವ ಪ್ರಶ್ನೆ ಪತ್ರಿಕೆಗಳನ್ನು ದಿನವಹಿಯಾಗಿ ಪರಿಶೀಲಿಸಿ, ಯಾವುದೇ ವಿಷಯಗಳ ಪ್ರಶ್ನೆ ಪತ್ರಿಕೆಗಳು ಪೂರೈಕೆ ಆಗದೇ ಇದ್ದಲ್ಲಿ / ಕಡಿಮೆ ಪ್ರಮಾಣದಲ್ಲಿ ಪೂರೈಕೆ ಆಗಿದ್ದಲ್ಲಿ ಅಂತಹ ಪ್ರಶ್ನೆ ಪತ್ರಿಕೆಗಳ ಬೇಡಿಕೆ ಪಟ್ಟಿಯನ್ನು <u>bteqpindent@gmail.com</u> ಇ-ಮೇಲ್ ವಿಳಾಸಕ್ಕೆ ಕಳುಹಿಸಲು ಸೂಚಿಸಲಾಗಿದೆ. ಹಾಗೂ ಸದರಿ ಪ್ರಶ್ನೆ ಪತ್ರಿಕೆಗಳನ್ನು ಪಡೆಯಲು ಸಂಸ್ಥೆಯ/ನೋಡಲ್ ಕೇಂದ್ರದ ಒಬ್ಬರು ಜವಾಬ್ದಾರಿಯುತ ಉಪನ್ಯಾಸಕರು/ಸಿಬ್ಬಂದಿಯವರನ್ನು ಮಂಡಳಿಗೆ ನಿಯೋಜಿಸಿ ಕಳುಹಿಸಲು ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ:
ರಾಜ್ಯದಲ್ಲಿನ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ:
1) ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು/ ಉಪ ಮುಖ್ಯ ಅಧೀಕ್ಷಕರು/ ಮುಖ್ಯ ವೀಕ್ಷಕರುಗಳಿಗೆ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ
2) ಇ-ಗವರ್ನೆಸ್ ವಿಭಾಗಕ್ಕೆ - ವೆಬ್ ಸೈಟ್‌ನಲ್ಲಿ ಪ್ರಕಟಿಸಲು
3) ಗಣಕ ಕೇಂದ್ರ - ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು
4) ಕಡತಕ್ಕೆ